## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-166ರಲ್ಲಿ ಘೋಷಿಸಿರುವಂತೆ ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು, ಡಾ|| ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಮತ್ತು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿನ ವಸತಿ ಶಾಲೆ ಮತ್ತು ಕಾಲೇಜುಗಳ ವಿದ್ಯಾರ್ಥಿಗಳಿಗೆ ಕೇಂದ್ರೀಯ ಆಹಾರ ತಾಂತ್ರಿಕ ಸಂಶೋಧನಾಲಯ, ಮೈಸೂರು (CFTRI) ರವರು ಶಿಫಾರಸ್ಸು ಮಾಡುವ ಪೌಷ್ಠಿಕಾಂಶದ ಪುಡಿ (Nutrition Powder) ವಿತರಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:-**

1. 2024-25 ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-166.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ: SWD/EDU/ED6/29/2024-EDN (1302817).
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಏಕ ಕಡತ ಸಂಖ್ಯೆ: KREIS/ADMN/FOOD/141/2024 (1357880).

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆಯವ್ಯಯ ಭಾಷಣ ಕಂಡಿಕೆ- 166 ರಲ್ಲಿ ಈ ಕೆಳಕಂಡಂತೆ ಘೋಷಿಸಿಲಾಗಿದೆ.

**"ಸಮಾಜ ಕಲ್ಯಾಣ, ಪರಿಶಿಷ್ಟ ಪಂಗಡಗಳ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಸತಿ ನಿಲಯಗಳು, ಆಶ್ರಮ ಶಾಲೆಗಳು ಮತ್ತು ವಸತಿ ಶಾಲೆಗಳ ವಿದ್ಯಾರ್ಥಿಗಳ ಭೋಜನ ವೆಚ್ಚವನ್ನು ಪ್ರತಿ ವಿದ್ಯಾರ್ಥಿಗೆ ಪ್ರತಿ ಮಾಹೆಗೆ ರೂ.100.00 ರಂತೆ ಹೆಚ್ಚಿಸಲಾಗುವುದು"**

ಮೇಲೆ ಓದಲಾದ ಕ್ರಮ ಸಂಖ್ಯೆ (2) ಮತ್ತು (3) ರಲ್ಲಿ ಆಯವ್ಯಯ ಭಾಷಣ ಕಂಡಿಕೆ-166 ರಲ್ಲಿ ಘೋಷಿಸಿದಂತೆ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿನ ಡಾ|| ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳು, ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು, ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಮತ್ತು ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ/ನಂತರದ ವಿದ್ಯಾರ್ಥಿನಿಲಯಗಳಲ್ಲಿನ ನಿಲಯಾರ್ಥಿಗಳ ಮಾಹೆಯಾನ ಇರುವ ಭೋಜನಾ ವೆಚ್ಚದ ದರವನ್ನು ಪರಿಷ್ಕರಿಸಿ ಹೆಚ್ಚುವರಿಯಾಗಿ ದಾಖಲಾಗುವ ವಿದ್ಯಾರ್ಥಿಗಳಿಗೆ ಅವಶ್ಯವಿರುವ ಹೆಚ್ಚುವರಿ ಅನುದಾನವನ್ನು ಆದೇಶ ಹೊರಡಿಸಲು ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ವಸತಿ ಶಾಲಾ ಹಾಗೂ ಕಾಲೇಜುಗಳ ಮಾಹೆಯಾನ ಭೋಜನಾ ವೆಚ್ಚವನ್ನು ಪರಿಷ್ಕರಿಸುವ ಜೊತೆಗೆ ಹೆಚ್ಚುವರಿ ಅನುದಾನವನ್ನು ಒದಗಿಸಲು ಸೂಕ್ತ ಆದೇಶ ಹೊರಡಿಸುವಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಮತ್ತು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಏಕ ಕಡತದಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

---2

ಮೇಲಿನ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಆಯವ್ಯಯ ಭಾಷಣ ಕಂಡಿಕೆ-166 ರಲ್ಲಿ ಘೋಷಿಸಿದಂತೆ ಪ್ರತಿ ವಿದ್ಯಾರ್ಥಿಗೆ ಪ್ರತಿ ಮಾಹೆ ರೂ.100/- ವೆಚ್ಚದಲ್ಲಿ ವಿದ್ಯಾರ್ಥಿಯ ದೈಹಿಕ ಬೆಳವಣಿಗೆ ದೃಷ್ಟಿಯಿಂದ ನಿಲಯಗಳಲ್ಲಿ ಲಭ್ಯವಿರುವ ಹಾಲು ಅಥವಾ ನೀರಿನಲ್ಲಿ ತ್ವರಿತವಾಗಿ ಮಿಶ್ರಣ ಮಾಡಿ ವಿದ್ಯಾರ್ಥಿಗೆ ವಿತರಣೆ ಮಾಡುವ ಹಿನ್ನೆಲೆಯಲ್ಲಿ ಕೇಂದ್ರೀಯ ಆಹಾರ ತಾಂತ್ರಿಕ ಸಂಶೋಧನಾಲಯ, ಮೈಸೂರು (CFTRI) ರವರಿಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅದರಂತೆ ಸದರಿ ಸಂಸ್ಥೆಯವರು ಶಿಫಾರಸ್ಸು ಮಾಡುವ ಪೌಷ್ಠಿಕಾಂಶದ ಪುಡಿ (Nutrition Powder) ನ್ನು ನಿಲಯಾರ್ಥಿಗಳಿಗೆ ವಿತರಿಸಲು ನಿರ್ಧರಿಸಿದ್ದು, ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಸಕಇ 287 ಪಕವಿ 2024, ಬೆಂಗಳೂರು, ದಿನಾಂಕ:12/08/2024.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-166ರಲ್ಲಿ ಘೋಷಿಸಿರುವಂತೆ ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು, ಡಾ|| ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳು ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿನ ವಸತಿ ಶಾಲೆ ಮತ್ತು ಕಾಲೇಜುಗಳ ವಿದ್ಯಾರ್ಥಿಗಳಿಗೆ ಪ್ರತಿ ಮಾಹೆ ತಲಾ ರೂ.100/- ಗಳ ವೆಚ್ಚದಲ್ಲಿ ಕೇಂದ್ರೀಯ ಆಹಾರ ತಾಂತ್ರಿಕ ಸಂಶೋಧನಾಲಯ, ಮೈಸೂರು (CFTRI) ರವರು ಶಿಫಾರಸ್ಸು ಮಾಡುವ ಪೌಷ್ಠಿಕಾಂಶದ ಪುಡಿ (Nutrition Powder) ನ್ನು ವಿತರಿಸಲು ಅನುಮತಿ ನೀಡಿದೆ.

ಈ ಸಂಬಂಧ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿನ ಡಾ|| ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳಿಗೆ ವಾರ್ಷಿಕ ಅಂದಾಜು ರೂ.25.00 ಕೋಟಿ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲೆ ಹಾಗೂ ಕಾಲೇಜುಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ವಾರ್ಷಿಕ ಅಂದಾಜು ರೂ.21.00 ಕೋಟಿ ವೆಚ್ಚವಾಗಲಿದ್ದು, ಒಟ್ಟಾರೆಯಾಗಿ ರೂ.46.00 ಕೋಟಿಗಳ ವೆಚ್ಚದಲ್ಲಿ ಸದರಿ ಕಾರ್ಯಕ್ರಮವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಷ್ಠಾನ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

**<u>ಷರತ್ತುಗಳು:</u>**

1. ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ವಸತಿ ಶಾಲೆಗಳು ಹಾಗೂ ವಿದ್ಯಾರ್ಥಿ ನಿಲಯಗಳು ಮತ್ತು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲೆ ಹಾಗೂ ಕಾಲೇಜುಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ಕೇಂದ್ರೀಯ ಆಹಾರ ತಾಂತ್ರಿಕ ಸಂಶೋಧನಾಲಯ, ಮೈಸೂರು (CFTRI) ರವರು ಶಿಫಾರಸ್ಸು ಮಾಡುವ ಪೌಷ್ಠಿಕಾಂಶದ ಪುಡಿ (Nutrition Powder) ನ್ನು ಪ್ರತಿ ವಿದ್ಯಾರ್ಥಿಗೆ ವಿತರಿಸಲು ಮಾತ್ರ ಸದರಿ ರೂ.100/- ಗಳನ್ನು ವಿನಿಯೋಗಿಸತಕ್ಕದ್ದು.

2. ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ವಸತಿ ಶಾಲೆಗಳು ಹಾಗೂ ವಿದ್ಯಾರ್ಥಿ ನಿಲಯಗಳು ಮತ್ತು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳ ಉಪಯೋಗಕ್ಕೆ ಬೇಕಾಗುವ ಪೌಷ್ಠಿಕಾಂಶದ ಪುಡಿ (Nutrition Powder) ನ್ನು ಕೆ.ಟಿ.ಪಿ.ಪಿ ನಿಯಮಗಳ ಅನ್ವಯ ರಾಜ್ಯ ಮಟ್ಟದಲ್ಲಿ ಅಥವಾ ಕಂದಾಯ ವಿಭಾಗ ಮಟ್ಟದಲ್ಲಿ ಟೆಂಡರ್ ಮೂಲಕ ಖರೀದಿ ಮಾಡಲು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರು ನಿರ್ಧರಿಸುವುದು.

3. ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು, ಡಾ|| ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳು ಹಾಗೂ ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ/ ನಂತರದ ವಿದ್ಯಾರ್ಥಿ ನಿಲಯಗಳ ಸಂಬಂಧ ಆಹಾರ ವೆಚ್ಚವನ್ನು ಕ್ರಮವಾಗಿ ಲೆಕ್ಕಶೀರ್ಷಿಕೆ:2225-00-101-0-61 (234)/(300), 2225-00-101-0-65 (234)/(300), 2225-00-101-0-32 (234) /(300) ಹಾಗೂ 2225-00-101-0-42. ರಡಿಯಲ್ಲಿ ಒದಗಿಸಲಾಗಿರುವ ರೂ.2019.09 ಲಕ್ಷಗಳಲ್ಲಿ ಭರಿಸುವುದು.

4. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲಾ ಹಾಗೂ ಕಾಲೇಜುಗಳ ನಿಲಯಾರ್ಥಿಗಳಿಗೆ ಆಹಾರ ವೆಚ್ಚಕ್ಕಾಗಿ ಲೆಕ್ಕಶೀರ್ಷಿಕೆ:2225-01-277-0-65 (059) /503 ರಡಿ ಒದಗಿಸಲಾಗುವ ರೂ.2110.00 ಲಕ್ಷಗಳ ಅನುದಾನದಲ್ಲಿ ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 393 ವೆಚ್ಚ-3/2024, ದಿನಾಂಕ: 24-07-2024 ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿಎಸ್ 48 ಐಎಂಎಂ 2024, ದಿನಾಂಕ:01-06-2024 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

12/8/24

(ಎಲ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು,(ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ), ವಿಧಾನಸೌಧ.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
5. ಜಂಟಿ ನಿರ್ದೇಶಕರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ(ಪ್ರ), ಪಿ.ಎಂ.ಐ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
7. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
8. ಎಲ್ಲಾ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
9. ಎಲ್ಲಾ ಜಿಲ್ಲೆಯ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
   **(ಕ್ರ.ಸಂ.7,8,9 ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಮೂಲಕ).**
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.

*****